NOVEMBER 29,2024

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ತೆರೆದ ಕೊಳವೆ ಬಾವಿಗಳಲ್ಲಿ ಮಕ್ಕಳು ಸಿಲುಕಿ, ದುರಂತಕ್ಕೀಡಾಗುವುದನ್ನು ತಪ್ಪಿಸಲು, ಸೂಕ್ತ ಕ್ರಮ ಕೈಗೊಳ್ಳಲು, ಬೆಳಗಾವಿಯ ವಿಧಾನಮಂಡಲ ಚಳಿಗಾಲದ ಅಧಿವೇಶನದಲ್ಲಿ, ತಿದ್ದುಪಡಿ ವಿಧೇಯಕ ಮಂಡಿಸಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ, ಬೆಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆ ನಿರ್ಧರಿಸಿದೆ. ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ, ಸುದ್ದಿಗೋಷ್ಠಿಯಲ್ಲಿ, ಸಚಿವ ಸಂಪುಟ ಸಭೆಯ ವಿವರ ನೀಡಿದರು. ಕೊಳವೆ ಬಾವಿ ದುರಂತ ಸಂಭವಿಸಿದಲ್ಲಿ ಜಮೀನಿನ ಮಾಲೀಕ ಅಥವಾ ತಪ್ಪಿತಸ್ಥರಿಗೆ ಒಂದು ವರ್ಷ ಜೈಲು ಶಿಕ್ಷೆ ಮತ್ತು 10 ಸಾವಿರ ರೂಪಾಯಿ ದಂಡ ವಿಧಿಸಲಾಗುವುದು. ಕೊಳವೆ ಬಾವಿಗಳ ಸುತ್ತ ಸುರಕ್ಷತಾ ಕ್ರಮ ಕೈಗೊಳ್ಳದಿದ್ದರೆ, 5 ಸಾವಿರ ರೂಪಾಯಿ ದಂಡ ಮತ್ತು 3 ತಿಂಗಳ ಜೈಲು ಶಿಕ್ಷೆಗೆ ಅವಕಾಶ ಹಾಗೂ ಕೊಳವೆ ಬಾವಿ ಕೊರೆಯುವ ಭೂ ಮಾಲೀಕರು ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳನ್ನು ಉಲ್ಲಂಘಿಸಿದ್ದಲ್ಲಿ, ಒಂದು ವರ್ಷ ಜೈಲು ಶಿಕ್ಷೆ ಮತ್ತು 20 ಸಾವಿರ ರೂಪಾಯಿ ದಂಡ ವಿಧಿಸಲು, ವಿಧೇಯಕದಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದರು. 108 ಕೋಟಿ 36 ಲಕ್ಷ ರೂಪಾಯಿ ವೆಚ್ಚದಲ್ಲಿ, ನಗರ ಆರೋಗ್ಯ ಕ್ಷೇಮ ಕೇಂದ್ರಗಳಲ್ಲಿ ಹಾಗೂ 39 ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಗಳಲ್ಲಿ, ನಮ್ಮ ಕ್ಲಿನಿಕ್‌ಗಳ ಸ್ಥಾಪನೆಗೆ ಸಚಿವ ಸಂಪುಟ ಅನುಮೋದಿಸಿದೆ.

<><><>

ನವಜಾತ ಶಿಶುಗಳ ಮರಣ ಪ್ರಮಾಣವನ್ನು ಕಡಿಮೆ ಮಾಡಲು, ತಾಲೂಕು ಆಸ್ಪತ್ರೆಗಳಲ್ಲಿ, ನವಜಾತ ಶಿಶುಗಳ ವಿಶೇಷ ಆರೈಕೆ ಘಟಕಗಳನ್ನು ವ್ಯವಸ್ಥೆ ಮಾಡಲಾಗುವುದು ಎಂದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ, ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲಿಸಿ, ಸಚಿವರು ಮಾತನಾಡಿದರು. ಜಿಲ್ಲಾ ಮಟ್ಟದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಗಳಲ್ಲಿ ಮಾತ್ರ, ವಿಶೇಷ ನವಜಾತ ಶಿಶುಗಳ ಆರೈಕೆ ಮತ್ತು ತುರ್ತು ಚಿಕಿತ್ಸಾ ಘಟಕಗಳಿವೆ. ಹೀಗಾಗಿ, ತಾಲೂಕಿನ ತಾಯಿ ಮತ್ತು ಮಕ್ಕಳ ಆರೈಕೆ ಆಸ್ಪತ್ರೆಗಳಲ್ಲಿ, ವಿಶೇಷ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು ಎಂದರು.

<><><>

ಈ ಮಧ್ಯೆ, ಬಳ್ಳಾರಿಯ ವಿಮ್ಸ್ ಆಸ್ಪತ್ರೆಯಲ್ಲಿ, ಕೂಡ್ಲಿಗಿ ಮೂಲದ ಬಾಣಂತಿಯೋರ್ವರ ಸಾವಿಗೆ ಸಂಬಂಧಿಸಿ, ಸಮಗ್ರ ವರದಿ ಸಲ್ಲಿಸುವಂತೆ, ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಜಿಲ್ಲಾಧಿಕಾರಿಗೆ ಸೂಚಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆ ಹಳಿಯಾಳದ, ಮುಂಡವಾಡ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಶೌಚಾಲಯದಲ್ಲಿ, ವಿದ್ಯುತ್ ತಗುಲಿ 2 ನೇ ತರಗತಿ ವಿದ್ಯಾರ್ಥಿನಿ ಸಾನ್ವಿ ಬಸವರಾಜ ಗೌಳಿ ಮೃತಪಟ್ಟಿದ್ದಾಳೆ. ಶಾಲೆ ಹೊರ ಭಾಗದಲ್ಲಿ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಪಡೆಯಲಾಗಿತ್ತು. ತಂತಿ ತುಂಡಾಗಿ ಶೌಚಾಲಯದಲ್ಲಿ ಬಿದ್ದಿರುವುದು ಅವಘಡಕ್ಕೆ ಕಾರಣ ಎನ್ನಲಾಗಿದೆ. ಮೃತಳ ಕುಟುಂಬಸ್ಥರಿಗೆ, ಆರ್.ವಿ ದೇಶಪಾಂಡೆ ಸಾಂತ್ವನ ಹೇಳಿದರು.

<><><>

ನ್ಯೂಮೋನಿಯಾ ಸೋಂಕಿನಿಂದಾಗಿ, ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು, ಮರಣ ಹೊಂದುವ ಪ್ರಮಾಣ ಕಡಿಮೆ ಮಾಡಲು, ನ್ಯೂಮೋನಿಯಾ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು, ರಾಯಚೂರು ಜಿಲ್ಲಾಧಿಕಾರಿ ನಿತೀಶ್ ತಿಳಿಸಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯೋಜಿಸಿದ್ದ, ಜನ ಜಾಗ್ರತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಸಾಮಾನ್ಯವಾಗಿ ಚಳಿಗಾಲದಲ್ಲಿ ಕಂಡುಬರುವ, ಕೆಮ್ಮು ಮತ್ತು ನೆಗಡಿಯನ್ನು ಪಾಲಕರು ನಿರ್ಲಕ್ಷಿಸಬಾರದು ಎಂದರು.

<><><>

ಹುಬ್ಬಳ್ಳಿಯ ನವನಗರದ, ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ, 6ನೇ ಘಟಿಕೋತ್ಸವ, ಇಂದು ಧಾರವಾಡದ ಕೃಷಿ ವಿಶ್ವವಿದ್ಯಾಲಯದ, ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ, ಪ್ರಗತಿಯಲ್ಲಿದೆ.

<><><>

ಧಾರವಾಡ ಘರಾಣೆಯ ಸಂಸ್ಥಾಪಕ, ಸಿತಾರ್ ರತ್ನ ರಹಿಮತ್ ಖಾನ್ ಅವರ 70ನೇ ಪುಣ್ಯತಿಥಿ ಅಂಗವಾಗಿ, ಅಮೃತ ಮಹೋತ್ಸವ ಸಂಭ್ರಮಾಚರಣೆ ಪ್ರಯುಕ್ತ, ಸಿತಾರ್ ರತ್ನ ಸಮಿತಿ, ಧಾರವಾಡದ ಸೃಜನಾ ರಂಗ ಮಂದಿರದಲ್ಲಿ, ಡಿಸೆಂಬರ್ 1 ರಿಂದ 7 ನೇ ತಾರೀಖೀನ ವರೆಗೆ ವಿಶೇಷ ಸಂಗೀತೋತ್ಸವ ಆಯೋಜಿಸಿದೆ. ದೇಶದ ಖ್ಯಾತ ಕಲಾವಿದರಿಂದ ಗಾಯನ–ವಾದನಗಳ ಸಂಗೀತದ ರಸ ಮಾಧುರ್ಯ ಹರಿದು ಬರಲಿದೆ. ಪ್ರತಿ ದಿನ ಸಂಜೆ 5.30ಕ್ಕೆ ಗಾಯನ–ವಾದನ ಕಛೇರಿ ಆಯೋಜಿತವಾಗಿದೆ.

<><><>

ಹುಬ್ಬಳ್ಳಿ ವಿದ್ಯುತ್‌ಶ್ಚಕ್ತಿ ಸರಬರಾಜು ಕಂಪೆನಿಯ, ಅಧ್ಯಕ್ಷರಾಗಿ ಶಿಗ್ಗಾಂವ ಕ್ಷೇತ್ರದ ಮಾಜಿ ಶಾಸಕ, ಸೈಯದ್ ಅಜ್ಜಂಪೀರ್ ಖಾದ್ರಿ ಅವರು, ಇಂದು ಮಧ್ಯಾಹ್ನ 3 ಗಂಟೆಗೆ, ಹುಬ್ಬಳ್ಳಿಯ ನವನಗರದಲ್ಲಿರುವ ಹೆಸ್ಕಾಂ ಕಚೇರಿಯಲ್ಲಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

<><><>

ರಾಜ್ಯದ ಬಹಳಷ್ಟು ಚಿಕ್ಕ ಕುಟುಂಬಗಳು ಬಾಳೆ ಕೃಷಿಯಲ್ಲಿ ತೊಡಗಿವೆ. ಚಿಕ್ಕ ಜಾಗದಲ್ಲೂ ಬಾಳೆ ಬೆಳೆಯಬಹುದು. ಈ ಬೆಳೆ ಖಚಿತವಾಗಿ ಆದಾಯ ತಂದುಕೊಡುತ್ತದೆ ಎಂದು, ಧಾರವಾಡ ಕೃಷಿ ವಿಶ್ವವಿದ್ಯಾಲಯದ ತೋಟಗಾರಿಕೆ ವಿಭಾಗದ ವಿಜ್ಞಾನಿ ಪ್ರೊಫೆಸರ್ ರಾಮಕೃಷ್ಣ ಹೆಗಡೆ, ಹೇಳಿದ್ದಾರೆ. ಧಾರವಾಡದ ಗಾಂಧಿ ಶಾಂತಿ ಪ್ರತಿಷ್ಠಾನದಲ್ಲಿ, ಸಹಜ ಸಮೃದ್ಧ ಸಂಸ್ಥೆ ಆಯೋಜಿಸಿರುವ, ಮೂರು ದಿನಗಳ ಬಾಳೆ ಮೇಳವನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಪ್ರಾಕೃತಿಕ ಏರುಪೇರು ಹಾಗೂ ದರ ವ್ಯತ್ಯಾಸದ ಮಧ್ಯೆಯೂ, ಬಾಳೆ ಬೆಳೆಗಾರರು ಖಚಿತ ಆದಾಯ ಪಡೆಯಬಹುದು ಎಂದರು.

<><><>

ದಾವಣಗೆರೆ ದೃಶ್ಯ ಕಲಾ ಮಹಾವಿದ್ಯಾಲಯ, ಗ್ರಾಮೀಣ ಭಾಗದ, ವೈವಿಧ್ಯಮಯ ಜೀವನ ಶೈಲಿಯನ್ನು ಬಿಂಬಿಸುವ, ಥೀಮ್ ಪಾರ್ಕ್ ಮತ್ತು ಗ್ರೀಕ್ ಶೈಲಿಯ ಕಲಾತ್ಮಕ ಬಯಲು ರಂಗ ಮಂದಿರ, ನಾಡಿದ್ದು, ಡಿಸೆಂಬರ್ 1 ರಿಂದ, ಸಾರ್ವಜನಿಕರ ವೀಕ್ಷಣೆಗೆ ಮುಕ್ತ ಎಂದು, ದಾವಣಗೆರೆ ವಿಶ್ವವಿದ್ಯಾಲಯದ ಉಪ ಕುಲಪತಿ ಬಿ.ಡಿ. ಕುಂಬಾರ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>